# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1093 (1200)
2. ಸದಸ್ಯರ ಹೆಸರು : ಡಾ: ಉಮಾಶ್ರೀ
3. ಉತ್ತರಿಸುವ ದಿನಾಂಕ : 21.08.2025
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

| ಪ್ರಶ್ನೆ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಲೋಕಾಯುಕ್ತ ಮತ್ತು ಲೋಕಾಯುಕ್ತ ಅಧಿಕಾರಿಗಳ ಹೆಸರಿನಲ್ಲಿ ವ್ಯಕ್ತಿಯೊಬ್ಬ ಅನೇಕ ಸರ್ಕಾರಿ ಅಧಿಕಾರಿಗಳನ್ನು ಬೆದರಿಸಿ ಕ್ರಿಪ್ಟೋ ಕರೆನ್ಸಿ ಮೂಲಕ ಹಣ ವಸೂಲಿ ಮಾಡಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಈ ಪ್ರಕರಣದಲ್ಲಿ ಲೋಕಾಯುಕ್ತ ಅಧಿಕಾರಿಗಳು ಶಾಮೀಲು ಆಗಿದ್ದಾರೆ ಎನ್ನಲಾಗುತ್ತಿದೆ ಇದು ನಿಜವೇ; ಹಾಗಿದ್ದಲ್ಲಿ, ಎಷ್ಟು ಅಧಿಕಾರಿಗಳು ಈ ಭ್ರಷ್ಟಾಚಾರ ಪ್ರಕರಣದಲ್ಲಿದ್ದಾರೆ; | ಪ್ರಕರಣದಲ್ಲಿನ ಆರೋಪಿ ನಿಂಗಪ್ಪ ಜಿ @ ನಿಂಗಪ್ಪ ಸಾವಂತ ಎಂಬ ವ್ಯಕ್ತಿ ಜೊತೆ **ಓರ್ವ ಲೋಕಾಯುಕ್ತ ಪೊಲೀಸ್ ಅಧಿಕಾರಿ ನಿಕಟ ಸಂಪರ್ಕ ಹೊಂದಿದ್ದು**, ಪ್ರಾಥಮಿಕ ತನಿಖೆಯಿಂದ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. |
| ಇ) | ಈ ರೀತಿ ಬೆದರಿಸಿ ಹಣ ವಸೂಲಿ ಮಾಡುತ್ತಿದ್ದ ವ್ಯಕ್ತಿಯ ಮೇಲೆ ಹಾಗೂ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ? | ಸದರಿ ಅಧಿಕಾರಿಗಳಿಗೆ ಬೆದರಿಸಿ ಹಣ ವಸೂಲಿ ಮಾಡಿದ್ದ ವ್ಯಕ್ತಿ ನಿಂಗಪ್ಪ ಜಿ. ಈತನ ವಿರುದ್ಧ **ಮೊಕದ್ದಮೆ ಸಂಖ್ಯೆ: 28/2005** ಕಲಂ 7A, 7(a) P.C. Act-1988 (ತಿದ್ದುಪಡಿ ಕಾಯ್ದೆ-2018)ರ ರೀತ್ಯಾ ಪ್ರಕರಣ ದಾಖಲಿಸಿದ್ದು, ಪ್ರಾಥಮಿಕ ತನಿಖೆಯಲ್ಲಿ ಕಂಡು ಬಂದ ಅಂಶಗಳ ಆಧಾರದ ಮೇಲೆ ಲೋಕಾಯುಕ್ತ ಪೊಲೀಸ್ ಅಧಿಕಾರಿ ಶ್ರೀ ಶ್ರೀನಾಥ್ ಜೋಶಿ ಮಹಾದೇವ್, ಐ.ಪಿ.ಎಸ್. ಹಿಂದಿನ ಪೊಲೀಸ್ ಅಧೀಕ್ಷಕರು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ನಗರ ವಿಭಾಗರವರನ್ನು ಪ್ರಕರಣದಲ್ಲಿ **ಆರೋಪಿ-2** ಆಗಿ ಪರಿಗಣಿಸಿದ್ದು, ತನಿಖೆ ಮುಂದುವರೆದಿರುತ್ತದೆ. |

**ಸಂಖ್ಯೆ:ಸಿಆಸುಇ 165 ಸೇಲೋಯು 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ